ವಿಷಯ :- ಸಿಂಧಗಿ ಸರ್ಕಾರಿ ಆಸ್ಪತ್ರೆಯಲ್ಲಿರುವ ವೈದ್ಯರ ಸಂಖ್ಯೆ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 735 (1525)

ಶ್ರೀ ಬಸವನಗೌಡ ರಾ ಪಾಟೀಲ್ (ವಿಜಾಪುರ) :- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸಿಂಧಗಿ ಸರ್ಕಾರಿ ಆಸ್ಪತ್ರೆಯಲ್ಲಿರುವ ವೈದ್ಯರ ಸಂಖ್ಯೆ ಎಷ್ಟು?

ಆ) ಆಸ್ಪತ್ರೆಯಲ್ಲಿ ಸರಿಯಾದ ವ್ಯವಸ್ಥೆ ಇಲ್ಲದೆ ಬಡರೋಗಿಗಳು ತೀವ್ರ ತೊಂದರೆ ಅನುಭವಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಸರ್ಕಾರದಿಂದ ನೀಡಲಾಗುವ ಔಷಧಿಗಳು ರೋಗಿಗಳಿಗೆ ತಲುಪುವುದಿಲ್ಲ ಎಂಬ ದೂರುಗಳು ಸಾರ್ವಜನಿಕರಿಂದ ಬಂದಿದೆಯೇ ಬಂದಿದ್ದಲ್ಲಿ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಡಾ. ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :-

ಅ) ಸಿಂಧಗಿ ಸರ್ಕಾರಿ ಆಸ್ಪತ್ರೆಗೆ ಮೂರು ವೈದ್ಯರ ಹುದ್ದೆಗಳು ಮಂಜೂರಾಗಿದ್ದು ಹಾಲಿ ಒಬ್ಬ ವೈದ್ಯರು ಕಾರ್ಯನಿರ್ವಹಿಸುತ್ತಿದ್ದು, ಎರಡು ಹುದ್ದೆ ಖಾಲಿ ಇದೆ.

ಆ) ಇಲ್ಲ.

ಇ) ಇಲ್ಲ.

ವಿಷಯ :- ಹಳ್ಳಿಗಳಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ತೆರೆಯುವ ಬಗ್ಗೆ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 737 (1549)

ಶ್ರೀ ಬಸವನಗೌಡ ರಾ. ಪಾಟೀಲ್ (ವಿಜಾಪುರ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 1995-96 ಹಾಗೂ 96-97 ನೇ ಸಾಲಿನಲ್ಲಿ ಮಂಜೂರು ಮಾಡಲ್ಪಡುವ ಸರ್ಕಾರಿ ಪ್ರೌಢಶಾಲೆಗಳೆಷ್ಟು?
(ಜಿಲ್ಲಾವಾರು ವಿವರ ನೀಡುವುದು)

ಆ) ಪ್ರತಿಯೊಂದು ವಿಧಾನ ಸಭೆಯ ವ್ಯಾಪ್ತಿಗೆ ಒಂದೊಂದು ಪ್ರೌಢಶಾಲೆ ನೀಡಿರುವುದು ಹಾಗೂ ಕೆಲವು ವಿಧಾನ ಸಭಾ ಕ್ಷೇತ್ರಕ್ಕೆ ಒಂದಕ್ಕಿಂತ ಹೆಚ್ಚು ಪ್ರೌಢ ಶಾಲೆಗಳನ್ನು ನೀಡಿರುವುದು ತಾರತಮ್ಯ ಧೋರಣೆ ಅಲ್ಲವೇ?

ಇ) ಅತಿ ಅವಶ್ಯವಿರುವ ಹಳ್ಳಿಗಳಿಗೆ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡುವುದರಿಂದ ಸಾಮಾನ್ಯ ವರ್ಗದ ಜನರಿಗೆ ಶಿಕ್ಷಣ ದೊರೆಯಲು ಅನುಕೂಲ ಮಾಡಿಕೊಟ್ಟಂತೆ ಆಗುವುದಿಲ್ಲವೇ?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :-

ಅ) 1. 1995-96 ನೇ ಸಾಲಿನಲ್ಲಿ ಸರ್ಕಾರಿ ಪ್ರೌಢಶಾಲೆಗಳು ಮಂಜೂರಾಗಿರುವುದಿಲ್ಲ.

2. 1996-97 ನೇ ಸಾಲಿನಲ್ಲಿ ಒಟ್ಟು 200 ಸರ್ಕಾರಿ ಪ್ರೌಢ ಶಾಲೆಗಳು ಮಂಜೂರಾಗಿರುತ್ತವೆ. ಜಿಲ್ಲಾವಾರು ವಿವರ ಈ ಕೆಳಕಂಡಂತಿದೆ.

1)	ಬೆಂಗಳೂರು ಉತ್ತರ ಜಿಲ್ಲೆ	03
2)	ಬೆಂಗಳೂರು ದಕ್ಷಿಣ ಜಿಲ್ಲೆ	08
3)	ಚಿತ್ರದುರ್ಗ	11
4)	ಕೋಲಾರ	09
5)	ಶಿವಮೊಗ್ಗ	11
6)	ತುಮಕೂರು	09
7)	ಮೈಸೂರು	14
8)	ಮಂಡ್ಯ	09
9)	ಹಾಸನ	08
10)	ಕೊಡಗು	04
11)	ದಕ್ಷಿಣ ಕನ್ನಡ	13
12)	ಚಿಕ್ಕಮಗಳೂರು	07
13)	ಬೆಳಗಾಂ	14
14)	ಬಿಜಾಪುರ	15
15)	ಧಾರವಾಡ	14
16)	ಉತ್ತರ ಕನ್ನಡ ಜಿಲ್ಲೆ	06
17)	ಬಳ್ಳಾರಿ	08
18)	ಬೀದರ್	04
19)	ಗುಲ್ಬರ್ಗಾ	09
20)	ಬೆಂಗಳೂರು ಗ್ರಾಮಾಂತರ ಜಿಲ್ಲೆ	11
	ಒಟ್ಟು ಪ್ರೌಢ ಶಾಲೆಗಳು	200

ಆ) ಶಾಲೆಗಳ ಅವಶ್ಯಕತೆ ಮತ್ತು ಸ್ಥಳೀಯ ಅಗತ್ಯಗಳಿಗೆ ಅನುಗುಣವಾಗಿ ಶಾಲೆಗಳನ್ನು ಮಂಜೂರು ಮಾಡಲಾಗಿದೆ. ಆದ್ದರಿಂದ ತಾರತಮ್ಯದ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಅತಿ ಅವಶ್ಯಕತೆ ಕಂಡು ಬಂದಂತಹ ಹಳ್ಳಿಗಳನ್ನು ಗಮನದಲ್ಲಿಟ್ಟುಕೊಂಡು ಅಂತಹ ಹಳ್ಳಿಗಳಿಗೆ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದೆ. ಇದರಿಂದ ಗ್ರಾಮೀಣ ಪ್ರದೇಶದಲ್ಲಿ ಸಾಮಾನ್ಯ ವರ್ಗದ ಜನರಿಗೆ ಉತ್ತಮ ಶಿಕ್ಷಣ ದೊರೆಯಲು ಅನುಕೂಲವಾಗಿರುತ್ತದೆ.